ಮೀನುಗಾರಿಕೆ ಅಭಿವೃದ್ಧಿ

251 (654) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಬಂದರು, ಒಳನಾಡು, ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಮತ್ತು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಳನಾಡಿನ ಮೀನುಗಾರಿಕೆಯನ್ನು ಅಭಿವೃದ್ಧಿ ಪಡಿಸಲು 2010–11ರಲ್ಲಿ 2.5 ಕೋಟಿ ರೂ.ಗಳ ಅನುದಾನವನ್ನು ಒದಗಿಸಿರುವುದು ನಿಜವಲ್ಲವೇ ;

ಆ) ಹಾಗಿದ್ದಲ್ಲಿ, ಈ ಪೈಕಿ ಇಲ್ಲಿಯವರೆವಿಗೆ ಎಷ್ಟು ಹಣವನ್ನು ಯಾವ ಯಾವ ಕಾರ್ಯಗಳಿಗಾಗಿ ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ;

ಇ) ಒಳನಾಡು ಮೀನುಗಾರಿಕೆ ಅಭಿವೃದ್ಧಿಯ ಸಲುವಾಗಿ ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದ ಬಳಿ 10 ಎಕರೆ ಪ್ರದೇಶದಲ್ಲಿ ಮೀನು ಮರಿ ಉತ್ಪಾದನಾ ಕೇಂದ್ರ ಸ್ಥಾಪನೆಗೆ ಸ್ಥಳವನ್ನು ಪಡೆಯಲಾಗಿದೆಯೇ ;

ಈ) ಈ ಕಾರ್ಯಕ್ಕಾಗಿ ವೆಚ್ಚ ಮಾಡಲಾಗಿರುವ ಹಣವೆಷ್ಟು ಹಾಗೂ ಕಾರಂಜಾ ಜಲಾಶಯದ ಬಳಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಹಾಗೂ ಮೀನು ಮರಿ ಉತ್ಪಾದನಾ ಕೇಂದ್ರದ ಸ್ಥಾಪನೆಯಾಗಿದೆಯೇ ;

ಉ) ಇಲ್ಲದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು) ?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಬಂದರು, ಒಳನಾಡು, ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಶಾಸ್ತ್ರ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಸಚಿವರು):

ಅ) ಹೌದು.

ಆ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದ ಬಳಿ ಹಾಗೂ ಮೈಸೂರು ಜಿಲ್ಲೆಯ ನುಗು ಬಳಿ ಮೀನು ಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಹಾಗೂ ಉನ್ನತೀಕರಣಕ್ಕಾಗಿ ರೂ. 147.00 ಲಕ್ಷ ಅನುದಾನವನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯಲ್ಲಿ ಠೇವಣಿ ಇಡಲಾಗಿದ್ದು. ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ. ಕಾಮಗಾರಿಗಳ ಪ್ರಗತಿಯನ್ನಾಧರಿಸಿ ವೆಚ್ಚ ಮಾಡಲಾಗುವುದು.

ಇ) ಹೌದು.

ಈ) ಈ ಕಾರ್ಯಾಕ್ಕಾಗಿ ರೂ. 47.00 ಲಕ್ಷವನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯಲ್ಲಿ ಠೇವಣಿ ಇರಿಸಲಾಗಿದ್ದು, ಕೊಳಗಳ ನಿರ್ಮಾಣದ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ.

ಉ) ಉದ್ಭವಿಸುವುದಿಲ್ಲ.

ವೈದ್ಯನಾಥನ್ ಸಮಿತಿಯ ಶಿಫಾರಸ್ಸುಗಳು

252 (655) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕು ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳ ಡಿ.ಸಿ.ಸಿ. ಬ್ಯಾಂಕುಗಳು ಈಗ ವೈದ್ಯನಾಥನ್ ಸಮಿತಿಯ ಶಿಫಾರಸ್ಸುಗಳನ್ನು ಒಪ್ಪಿಕೊಂಡಿರುವುದು ನಿಜವಲ್ಲವೇ ? ಇದರಿಂದ ಆಡಳಿತಾತ್ಮಕ ಹಾಗೂ ನೇಮಕಾತಿಯ ವಿಷಯದಲ್ಲಿ ಈ ಬ್ಯಾಂಕುಗಳಿಗೆ ಸದರಿ ಶಿಫಾರಸ್ಸಿನನ್ವಯ ಯಾವ ಯಾವ ಅನುಕೂಲಗಳಾಗಿವೆ ; (ಪೂರ್ಣ ವಿವರಗಳನ್ನು ಒದಗಿಸುವುದು)